ಕರ್ನಾಟಕ ಸರ್ಕಾರ

**ಪರೀಕ್ಷಾ ತುರ್ತು**

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03**

ಸಂಖ್ಯೆ:ಎ8/ಪ್ರ.ಪ.ಸು/ಮಾರ್ಚ್–24/22/2023–24 ದಿನಾಂಕ:06.03.2024

**:: ಸುತ್ತೋಲೆ ::**

ವಿಷಯ: 2024ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳ ವಿತರಣೆ ಕುರಿತು.

ಉಲ್ಲೇಖ: 1. ಮಂಡಲಿ ಮಾರ್ಗಸೂಚಿ ಸಂಖ್ಯೆ:ಎ8/ಎಸ್ಎಸ್ಎಲ್‌ಸಿ.ಅಧಿಸೂಚನೆ/ಮಾರ್ಚ್–24/24/23–24 ದಿನಾಂಕ:04.10.2023

* * * * * * *

2024ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳನ್ನು ದಿನಾಂಕ: 06.03.2024 ರಂದು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಶಾಲಾ ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಲಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿತರಿಸುವುದು.

1. ತಮ್ಮ ಶಾಲೆಯ ಮುಖಾಂತರ ನೋಂದಾಯಿಸಿದ ವಿದ್ಯಾರ್ಥಿಗಳ ಸಂಖ್ಯೆ, ಡೌನ್‌ಲೋಡ್ ಮಾಡಿಕೊಂಡ **ಪ್ರವೇಶ ಪತ್ರಗಳ ಸಂಖ್ಯೆಗೆ ಸರಿ ಹೊಂದುತ್ತಿದೆಯೇ ಎಂದು** ಪರಿಶೀಲಿಸಿಕೊಳ್ಳುವುದು. ಒಂದು ವೇಳೆ ಯಾವುದಾದರು ವಿದ್ಯಾರ್ಥಿಯ ಪ್ರವೇಶ ಪತ್ರ ಬಂದಿಲ್ಲದಿದ್ದರೆ, ಸದರಿ ವಿದ್ಯಾರ್ಥಿಯ ವಿವರವನ್ನು ಸಮರ್ಥನೆಯೊಂದಿಗೆ / ದಾಖಲೆಗಳೊಂದಿಗೆ ಕೂಡಲೇ ಮಂಡಲಿಗೆ ಕಳುಹಿಸಿಕೊಡುವುದು.

2. ಒಂದು ವೇಳೆ CCERF ವಿದ್ಯಾರ್ಥಿ CCEPF ಆಗಿದ್ದು, ಅಥವಾ CCEPF ವಿದ್ಯಾರ್ಥಿ CCERF ಆಗಿದ್ದು, ಹೀಗೆ ವಿದ್ಯಾರ್ಥಿಯ ವಿಧ ಬದಲಾಗಿದ್ದಲ್ಲಿ ಅಂತಹ **ಪ್ರವೇಶ ಪತ್ರಗಳನ್ನು ಸೂಕ್ತ ದಾಖಲೆಗಳ ಸಮರ್ಥನೆಯೊಂದಿಗೆ ತಿದ್ದುಪಡಿಗಾಗಿ ಮಂಡಲಿಗೆ ಕಳುಹಿಸಿಕೊಡುವುದು.**

3. ಉಲ್ಲೇಖಿತ–1ರ ಅಧಿಸೂಚನೆಯಲ್ಲಿ ವಿವರಿಸಿರುವಂತೆ ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ವಿಶೇಷ ಸೌಲಭ್ಯ/ವಿನಾಯಿತಿ ನೀಡುವ ಸಂಬಂಧ ಉಪನಿರ್ದೇಶಕರ ಜ್ಞಾಪನದನ್ವಯ ದೈಹಿಕ ಸ್ಥಿತಿ, ಭಾಷಾ ವಿನಾಯಿತಿ, ಬದಲಿ ವಿಷಯಗಳ ಮಾಹಿತಿಗಳು ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಬಗ್ಗೆ ಮುಖ್ಯಶಿಕ್ಷಕರು ಖಚಿತಪಡಿಸಿಕೊಳ್ಳುವುದು. ಇಲ್ಲವಾದಲ್ಲಿ ಉಪನಿರ್ದೇಶಕರ [ಆಡಳಿತ]ರವರ ಜ್ಞಾಪನದ ಪ್ರತಿಯನ್ನು ದೃಢೀಕರಿಸಿ ಸಮರ್ಥನೆಯೊಂದಿಗೆ ಸಂಬಂಧಿಸಿದ ಶಾಖಾಧಿಕಾರಿಗಳಿಗೆ ಕಳುಹಿಸಿ ವಿನಾಯಿತಿ ಪಡೆದುಕೊಳ್ಳುವುದು.

4. ವಿದ್ಯಾರ್ಥಿಯ ಭಾವಚಿತ್ರ, ಸಹಿ ಮತ್ತು ಇತರೆ ತಿದ್ದುಪಡಿಗಳಿದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ಮಂಡಲಿಗೆ ಸಲ್ಲಿಸಿ ಸರಿಪಡಿಸಿಕೊಳ್ಳುವುದು. ಒಂದು ವೇಳೆ ಸರಿಪಡಿಸಿಕೊಳ್ಳದೇ ಇದ್ದಲ್ಲಿ ಇದರಿಂದ ವಿದ್ಯಾರ್ಥಿಗೆ ಮುಂದೆ ಅಂಕಪಟ್ಟಿಯಲ್ಲಾಗುವ ತೊಂದರೆಗೆ ಸಂಬಂಧಿಸಿದ ಶಾಲಾ ಮುಖ್ಯಸ್ಥರೇ ಜವಾಬ್ದಾರರಾಗಿದ್ದು, ಮಂಡಲಿಯು ಇದರ ಜವಾಬ್ದಾರಿ ಹೊರುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಿದೆ.

5. ಯಾವುದೇ ವಿದ್ಯಾರ್ಥಿಯ ಭಾವಚಿತ್ರ ಬದಲಾವಣೆಗೆ ಸಂಬಂಧಿಸಿದಂತೆ, ಪರೀಕ್ಷೆಗೆ ಪೂರ್ವದಲ್ಲಿ ಮಾಡಲಾದ ಬದಲಾವಣೆಗಳನ್ನು ಮಾತ್ರ ಮಂಡಲಿಯು ಪರಿಗಣಿಸುತ್ತದೆ. ಪರೀಕ್ಷಾ ನಂತರದಲ್ಲಿ ಬರುವ

ವಿದ್ಯಾರ್ಥಿಗಳ ಭಾವಚಿತ್ರ ಬದಲಾವಣೆ ಕುರಿತ ಯಾವುದೇ ಮನವಿಗಳನ್ನು ಮಂಡಲಿ ಪುರಸ್ಕರಿಸುವುದಿಲ್ಲ. ಇದಕ್ಕೆ ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳು ನೇರ ಜವಾಬ್ದಾರರಾಗಿರುತ್ತಾರೆ. ಒಂದು ವೇಳೆ ಇದಕ್ಕೆ ವ್ಯತಿರಿಕ್ತವಾಗಿ ಬದಲಿ ವಿದ್ಯಾರ್ಥಿ ಪರೀಕ್ಷೆ ಬರೆಯಲು ಸಹಕರಿಸಿ ಪರೀಕ್ಷಾ ಅವ್ಯವಹಾರದಲ್ಲಿ ಭಾಗಿಯಾಗಿದಲ್ಲಿ ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಮತ್ತು ಶಾಲಾ ಮುಖ್ಯಸ್ಥರ ಮೇಲೆ ಕೆ.ಸಿ.ಎಸ್ (ಸಿ.ಸಿ.ಎ.) ನಿಯಮ–1957 ಮತ್ತು 1983ರ ಕರ್ನಾಟಕ ಶಿಕ್ಷಣ ಕಾಯ್ದೆ ಹಾಗೂ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ–1966 ರನ್ವಯ ಕ್ರಮ ಜರುಗಿಸಲಾಗುವುದು.

6. ಒಂದೇ ವಿದ್ಯಾರ್ಥಿಗೆ ಎರಡು ನೋಂದಣಿ ಸಂಖ್ಯೆಯ ಪ್ರವೇಶ ಪತ್ರಗಳು ಬಂದಿದ್ದಲ್ಲಿ ಒಂದನ್ನು ಉಳಿಸಿಕೊಂಡು ಮತ್ತೊಂದನ್ನು ರದ್ದುಪಡಿಸಿ ದೃಢೀಕರಿಸಿ ಸೂಕ್ತ ಷರಾದೊಂದಿಗೆ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳ ವಿಳಾಸಕ್ಕೆ ಹಿಂದಿರುಗಿಸುವುದು.

7. CCERF, CCERR, CCEPF, CCEPR, NSR & NSPR ಅಭ್ಯರ್ಥಿಗಳನ್ನು ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಹಂಚಿಕೆ ಮಾಡಲಾಗಿರುತ್ತದೆ. ಶಾಲಾ ಮುಖ್ಯ ಶಿಕ್ಷಕರು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಈ ಕುರಿತು ಮಾಹಿತಿಯನ್ನು ನೀಡುವುದು.

8. **ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳಲ್ಲಿ ವಿದ್ಯಾಥಿಯ ಹೆಸರು, ತಂದೆ ಹೆಸರು, ತಾಯಿ ಹೆಸರು, ಭಾವಚಿತ್ರ, ಸಹಿ, ಇತರೆ ತಿದ್ದುಪಡಿಗಳಿದ್ದಲ್ಲಿ, CCERF ವಿದ್ಯಾರ್ಥಿಗಳಿಗೆ ಎಸ್.ಎ.ಟಿ.ಎಸ್ ನಲ್ಲಿ ತಿದ್ದುಪಡಿ ಮಾಡಿದ ಪ್ರತಿಯೊಂದಿಗೆ ಮತ್ತು ಇತರೆ ದಾಖಲೆಗಳೊಂದಿಗೆ ಪ್ರತಿ ತಿದ್ದುಪಡಿಗೆ ರೂ.100/- ದಂಡ ಶುಲ್ಕ ಹಾಗೂ ಮಾಧ್ಯಮ ಬದಲಾವಣೆ ಇದಲ್ಲಿ ಪ್ರತಿ ತಿದ್ದುಪಡಿಗೆ ಮಂಡಲಿ ನಿಯಮ 1966ರ Annexure-III ರ ನಿಯಮ 24ರಡಿ ರೂ.500/- ದಂಡ ಶುಲ್ಕವನ್ನು ನೆಫ್ಟ್ ಚಲನ್ ಮೂಲಕ ಪಾವತಿಸಿ ದಿನಾಂಕ: 16.03.2024 ರ ಸಂಜೆ 5.00 ಗಂಟೆಯೊಳಗೆ ಮಂಡಳಿಗೆ ತಲುಪುವಂತೆ ಪ್ರಸ್ತಾವನೆಯನ್ನು ಸಲ್ಲಿಸುವುದು.**

**ಮಾರ್ಚ್/ಏಪ್ರಿಲ್ –2024ರ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ಅಂತಿಮ ಪ್ರವೇಶ ಪತ್ರಗಳಲ್ಲಿ ತಿದ್ದುಪಡಿಗಳಿದಲ್ಲಿ ಪ್ರಸ್ತಾವನೆಯನ್ನು ರವಾನಿಸಬೇಕಾದ ಮಂಡಲಿಯ ಅಧಿಕಾರಿಗಳ ಹೆಸರು ಮತ್ತು ಸಂಬಂಧಿಸಿದ ಜಿಲ್ಲೆಗಳ ಮಾಹಿತಿ.**

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು ಶ್ರೀಮತಿ/ ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ |
|---|---|---|---|---|
| 1 | ಎಫ್ | ಅಯೂಬ್ ಪಾಷಾ, ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಕೋಲಾರ, ಮಧುಗಿರಿ. | 9480021609 |
| 2 | ಜಿ | ಬಿ. ನರೇಂದ್ರಕುಮಾರ್, ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ, ರಾಮನಗರ, ತುಮಕೂರು, ಶಿವಮೊಗ್ಗ. | 9900190492 |
| 3 | ಹೆಚ್ | ಅನಿತ ಆರ್ ಸಹಾಯಕ ನಿರ್ದೇಶಕರು | ಚಾಮರಾಜನಗರ, ಮಂಡ್ಯ ಮೈಸೂರು, ಉಡುಪಿ. | 9620213336 |
| 4 | ಐ | ಎಮ್ ವಿ ಕುಮಾರಿ ಹಿರಿಯ ಸಹಾಯಕ ನಿರ್ದೇಶಕರು | ದಕ್ಷಿಣ ಕನ್ನಡ, ಹಾಸನ, ಚಿಕ್ಕಮಗಳೂರು, ಕೊಡಗು | 8762404243 |
| 5 | ಜೆ | ಜಯರಾಮುಡು, ಸಹಾಯಕ ನಿರ್ದೇಶಕರು | ಬೆಳಗಾವಿ, ಚಿಕ್ಕೋಡಿ, ವಿಜಯಪುರ, ಬಾಗಲಕೋಟೆ | 9449674952 |
| 6 | ಕೆ | ಗಾಯತ್ರಿದೇವಿ., ಹಿರಿಯ ಸಹಾಯಕ ನಿರ್ದೇಶಕರು | ಧಾರವಾಡ, ಶಿರಸಿ, ಉತ್ತರ ಕನ್ನಡ, ಹಾವೇರಿ | 9986090437 |
| 7 | ಎಲ್ | ಸೋಮಶೇಖರ್.ಕೆ ಸಹಾಯಕ ನಿರ್ದೇಶಕರು | ಬಳ್ಳಾರಿ, ವಿಜಯನಗರ, ಯಾದಗಿರಿ, ರಾಯಚೂರು, | 9663312146 |
| 8 | ಎಂ | ಕೆ.ಆರ್ ಮುರಳೀಧರ್ ಸಹಾಯಕ ನಿರ್ದೇಶಕರು | ಕಲಬುರಗಿ, ಬೀದರ್, ಕೊಪ್ಪಳ | 9980631581 |
| 9 | ಎನ್ | ಹೆಚ್ ಎಮ್ ಪ್ರಭುಸ್ವಾಮಿ ಸಹಾಯಕ ನಿರ್ದೇಶಕರು | ಬೆಂಗಳೂರು ಗ್ರಾಮಾಂತರ, ದಾವಣಗೆರೆ, ಚಿತ್ರದುರ್ಗ, ಗದಗ | 9845167396 |

ಈ ಮೇಲ್ಕಂಡ ಅಂಶಗಳಂತೆ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆದ್ಯತೆ ಮೇರೆಗೆ ಕಡ್ಡಾಯವಾಗಿ ಪರಿಶೀಲಿಸಿ, ತಿದ್ದುಪಡಿಗಳಿದ್ದಲ್ಲಿ ಪಟ್ಟಿ ಮಾಡಿ ನಮೂದಿಸಿ, ಸದರಿ ಪ್ರವೇಶ ಪತ್ರಗಳನ್ನು ಸರಿಪಡಿಸಲು ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಮಂಡಲಿಯ ಪರಿಶೀಲನಾಧಿಕಾರಿಗಳಿಗೆ ದಂಡ ಶುಲ್ಕದೊಂದಿಗೆ **ದಿನಾಂಕ: 16.03.2024 ರ ಸಂಜೆ 5.00 ಗಂಟೆಯೊಳಗೆ** ತಲುಪುವಂತೆ ಪ್ರಸ್ತಾವನೆಯನ್ನು ಕಳುಹಿಸತಕ್ಕದ್ದು. ನಂತರ ತಿದ್ದುಪಡಿಗಾಗಿ ಬಂದ ಯಾವುದೇ ಕೋರಿಕೆಗಳನ್ನು ಪರಿಗಣಿಸಲಾಗುವುದಿಲ್ಲ. ತಿದ್ದುಪಡಿಗೆ ಅರ್ಹವಾದ ಪ್ರವೇಶ ಪತ್ರಗಳನ್ನು ಸೂಕ್ತ ತಿದ್ದುಪಡಿ ಮಾಡಿ, ಪರಿಷ್ಕೃತ ಪ್ರವೇಶ ಪತ್ರಗಳನ್ನು ಮಂಡಲಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗುವುದು.

6/3/2024

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು ಪರೀಕ್ಷೆಗಳು

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ),. ಶಾ.ಶಿ. ಇಲಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾ.ಶಿ.ಇಲಾಖೆ, ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
6. ಶಾಖಾಧಿಕಾರಿಗಳು, ಬಿ & ಸಿ ಶಾಖೆಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
7. ಶಾಖಾಧಿಕಾರಿಗಳು, ಗಣಕ ಶಾಖೆ ಇವರು ಈ ಸುತ್ತೋಲೆಯನ್ನು ಮಂಡಳಿಯ ಜಾಲತಾಣದಲ್ಲಿ & ಶಾಲಾಲಾಗಿನ್‌ನಲ್ಲಿ ಪ್ರಕಟಿಸುವುದು ಮತ್ತು ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಇಮೇಲ್‌ಗೆ ಕಳುಹಿಸುವುದು.
8. ಮಂಡಳಿಯ ಎಲ್ಲಾ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು :-**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ವಿಭಾಗರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಅಧ್ಯಕ್ಷರು, ಕ.ಶಾ.ಪ.ಮೌ.ಮಂಡಲಿ ರವರ ಆಪ್ತ ಶಾಖೆಗೆ ಮಾಹಿತಿಗಾಗಿ.
4. ನಿರ್ದೇಶಕರು / ಕಾರ್ಯದರ್ಶಿಗಳ ಆಪ್ತ ಶಾಖೆಗೆ ಮಾಹಿತಿಗಾಗಿ,
5. ಕಛೇರಿ ಪ್ರತಿ.